# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 523 |
| **ಸದಸ್ಯರ ಹೆಸರು** | : | ಶ್ರೀಮತಿ ಹೇಮಲತಾ ನಾಯಕ (ವಿಧಾನ ಸಭೆಯಿಂದ ಚುನಾಯಿತರಾದವರು) |
| **ಉತ್ತರಿಸುವವರು** | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |
| **ಉತ್ತರಿಸಬೇಕಾದ ದಿನಾಂಕ** | : | 30.01.2026. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಅತಿ ಹೆಚ್ಚು ಕುಬ್ಜ ಮಕ್ಕಳ ಸಂಖ್ಯೆ ದಾಖಲಾಗಿರುವ ಜಿಲ್ಲೆಗಳು ಯಾವುವು: (ಜಿಲ್ಲಾವಾರು ಸಂಖ್ಯೆಯನ್ನು ಒದಗಿಸುವುದು) | ರಾಜ್ಯದ ಬೆಳಗಾವಿ , ವಿಜಯಪುರ, ಕಲಬುರ್ಗಿ ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಹೆಚ್ಚು ಕುಬ್ಜ ಮಕ್ಕಳನ್ನು ಗುರುತಿಸಲಾಗಿರುತ್ತದೆ.<br><br>ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾಗಿರುವ ಕುಬ್ಜ ಮಕ್ಕಳ ಸಂಖ್ಯೆಯ ಜಿಲ್ಲಾವಾರು ಮಾಹಿತಿಯನ್ನು **ಅನುಬಂಧ-01**ರಲ್ಲಿ ಒದಗಿಸಿದೆ. |
| ಆ) | ದೇಶದಲ್ಲಿಯೇ ರಾಯಚೂರು ಜಿಲ್ಲೆಯಲ್ಲಿ ಕುಬ್ಜ ಮಕ್ಕಳ ಸಂಖ್ಯೆ ಹೆಚ್ಚು ಎಂಬ ಮಾಹಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದರೆ, ಅದನ್ನು ದೃಢೀಕರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು: | ಹೌದು, ದೇಶದಲ್ಲಿಯೇ ರಾಯಚೂರು ಜಿಲ್ಲೆಯಲ್ಲಿ ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾಗಿರುವ 157264 ಮಕ್ಕಳನ್ನು ಅಳತೆ ಮಾಡಲಾಗಿ 36836 ಕುಬ್ಜ ಮಕ್ಕಳನ್ನು ಗುರುತಿಸಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ಸರ್ಕಾರವು ಕುಬ್ಜ ಮಕ್ಕಳನ್ನು ಗುರುತಿಸಲು ಅನುಸರಿಸುತ್ತಿರುವ ಕ್ರಮದ ವಿವರ:<br><br>➤ **ಪೋಷಣ್** ಅಭಿಯಾನ್ ಯೋಜನೆಯಡಿ ಪ್ರತೀ ಮಾಹೆಯಲ್ಲಿ ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾದ ಎಲ್ಲಾ 0-6 ವರ್ಷದ ಮಕ್ಕಳ ಎತ್ತರ ಮತ್ತು ತೂಕವನ್ನು ಮರು ಪರಿಶೀಲಿಸಿ ಮಕ್ಕಳ ಅಪೌಷ್ಠಿಕ ಮಟ್ಟದ ನಿಖರ ಮಾಹಿತಿಯನ್ನು ಪಡೆಯಲು ಕ್ರಮವಹಿಸಲಾಗುತ್ತಿದೆ. |
| ಇ) | ಕುಬ್ಜತೆಯನ್ನು ತಡೆಗಟ್ಟಲು ಮತ್ತು ಕಡಿಮೆ ಮಾಡಲು ಪೌಷ್ಠಿಕಾಂಶ, ಆರೋಗ್ಯ ತಪಾಸಣೆ ಮತ್ತು ಪೂರಕ ಆಹಾರ ಕಾರ್ಯಕ್ರಮಗಳ ಮೂಲಕ ಸರ್ಕಾರ ಯಾವ ಯಾವ ಕ್ರಮಗಳನ್ನು ಜಾರಿಗೆ ತಂದಿದೆ: | ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾಗುವ 0-6 ವರ್ಷದ ಮಕ್ಕಳಲ್ಲಿನ ಕುಬ್ಜತೆ ಹಾಗೂ ಅಪೌಷ್ಠಿಕತೆ ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳ ವಿವರವನ್ನು **ಅನುಬಂಧ –02** ರಲ್ಲಿ ಒದಗಿಸಿದೆ. |
| ಈ) | ಅಂಗನವಾಡಿ ಕೇಂದ್ರಗಳಲ್ಲಿ ಸಮರ್ಪಕ ಪೌಷ್ಠಿಕ ಆಹಾರ ಪೂರೈಕೆ ಆಗುತ್ತಿಲ್ಲ ಎಂಬ ವರದಿಗಳು ಸರ್ಕಾರ ಗಮನಕ್ಕೆ ಬಂದಿದೆಯೇ ಬಂದಿದ್ದರೆ, ಆಹಾರ ಪೂರೈಕೆಯನ್ನು ಖಾತ್ರಿಪಡಿಸಲು ತೆಗೆದುಕೊಂಡ ಕ್ರಮಗಳೇನು: | ಅಂಗನವಾಡಿ ಕೇಂದ್ರಗಳಲ್ಲಿ ಸಮರ್ಪಕ ಪೌಷ್ಠಿಕ ಆಹಾರ ಪೂರೈಕೆ ಆಗುತ್ತಿಲ್ಲ ಎಂಬ ವರದಿಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. ಅಂಗನವಾಡಿ ಕೇಂದ್ರಗಳ ಫಲಾನುಭವಿಗಳಿಗೆ ಕೇಂದ್ರ ಸರ್ಕಾರ ನಿಗದಿಪಡಿಸಿದ ಘಟಕ ವೆಚ್ಚ, ಕ್ಯಾಲೋರೀಸ್, ಪ್ರೋಟೀನ್ ಮತ್ತು ಮೈಕ್ರೋ ನ್ಯೂಟ್ರಿಯೆಂಟ್ಸ್ ಒಳಗೊಂಡಂತೆ ಪೂರಕ ಪೌಷ್ಟಿಕ ಆಹಾರವನ್ನು ನಿಗದಿತ ಅವಧಿಯಲ್ಲಿ ಸಮರ್ಪಕವಾಗಿ ಪೂರೈಕೆಯಾಗುತ್ತಿದೆ.<br><br>ಫಲಾನುಭವಿಗಳಿಗೆ ಸಕಾಲದಲ್ಲಿ ಪೂರಕ ಆಹಾರ ಪೂರೈಕೆಯಾಗುತ್ತಿರುವುದನ್ನು ಖಾತ್ರಿ ಪಡಿಸಿಕೊಳ್ಳಲು ಇಲಾಖೆಯು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ:<br><br>1. ಅಂಗನವಾಡಿ ಕೇಂದ್ರಗಳ ಫಲಾನುಭವಿಗಳಿಗೆ ಆಹಾರ ಪದಾರ್ಥಗಳನ್ನು ವಿತರಿಸುವ ಮುನ್ನ NABL (National Accreditation Board for Testing and Calibration |

| | | |
|---|---|---|
| | | Laboratories) ನಲ್ಲಿ ನೋಂದಾಯಿ... ಪ್ರಯೋಗಾಲಯಗಳ ಮೂಲಕ ಆಹಾರದಲ್ಲಿನ ಪೌಷ್ಠಿಕಾಂಶಗಳ ಗುಣಮಟ್ಟ ಮತ್ತು ನಿಯತಾಂಕಗಳನ್ನು ರಾಸಾಯನಿಕ ವಿಶ್ಲೇಷಣೆಗೆ ಒಳಪಡಿಸಿ ಉತ್ತಮ ಗುಣಮಟ್ಟದ ಪೂರಕ ಪೌಷ್ಠಿಕ ಆಹಾರವನ್ನು ಎಂ.ಎಸ್.ಪಿ.ಸಿ. ಗಳಿಂದ ಅಂಗನವಾಡಿ ಕೇಂದ್ರಗಳಿಗೆ ಸರಬರಾಜು ಮಾಡಲಾಗುತ್ತಿದೆ.<br>2. ಅಂಗನವಾಡಿ ಕೇಂದ್ರದ ಫಲಾನುಭವಿಗಳಿಗೆ ಸಕಾಲದಲ್ಲಿ ಉತ್ತಮ ಗುಣಮಟ್ಟದ ಪೂರಕ ಪೌಷ್ಠಿಕ ಆಹಾರವನ್ನು ಪೂರೈಸಲು ಮತ್ತು ಅದರ ಮೇಲ್ವಿಚಾರಣೆ ಮಾಡಲು ಅನುಕೂಲವಾಗುವಂತೆ, ಪ್ರತಿ ತಿಂಗಳು ಫಲಾನುಭವಿಗಳ ವಿವರಗಳೊಂದಿಗೆ ಬೇಡಿಕೆಯನ್ನು (ಇಂಡೆಂಟ್) ಎಂ.ಎಸ್.ಪಿ.ಸಿ.ಗಳಿಗೆ ಸಲ್ಲಿಸಲಾಗುತ್ತಿದೆ. ಬೇಡಿಕೆಗೆ ಅನುಗುಣವಾಗಿ ಎಂ.ಎಸ್.ಪಿ.ಸಿ.ಗಳು ಆಹಾರ ಪದಾರ್ಥಗಳನ್ನು ನೇರವಾಗಿ ಅಂಗನವಾಡಿ ಕೇಂದ್ರಗಳಿಗೆ ಸರಬರಾಜು ಮಾಡುತ್ತದೆ.<br>3. ಪೂರಕ ಪೌಷ್ಠಿಕ ಆಹಾರವು ಸಕಾಲಕ್ಕೆ ಪೂರೈಕೆಯಾಗುತ್ತಿರುವುದನ್ನು ಮತ್ತು ಅಂಗನವಾಡಿ ಕೇಂದ್ರಗಳ ಫಲಾನುಭವಿಗಳಿಗೆ ವಿತರಣೆಯಾಗುತ್ತಿರುವುದನ್ನು ಖಚಿತ ಪಡಿಸಿಕೊಳ್ಳಲು, ಕೇಂದ್ರ ಸರ್ಕಾರದ ಪೋಷಣ್ ಟ್ರ್ಯಾಕರ್ ಅಪ್ಲಿಕೇಶನ್ ಹಾಗೂ ಫೇಸ್ ರೆಕಗ್ನಿಷನ್ ಸಿಸ್ಟಮ್ (FRS) ಮೂಲಕ ನೈಜ ಸಮಯದಲ್ಲಿ ಮೇಲ್ವಿಚಾರಣೆ ಮಾಡಲಾಗುತ್ತದೆ. ಇದರೊಂದಿಗೆ, ಪ್ರತಿ ಅಂಗನವಾಡಿಯಲ್ಲಿ ಬಾಲವಿಕಾಸ ಸಮಿತಿ ಹಾಗೂ ಜಿಲ್ಲಾ ಮಟ್ಟದಲ್ಲಿ ಮೇಲ್ವಿಚಾರಣಾ ಸಮಿತಿಯನ್ನು ಸಹ ರಚಿಸಲಾಗಿದೆ.<br>4. ಇಲಾಖೆಯ ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಅಂಗನವಾಡಿ ಕೇಂದ್ರಗಳ ಕುರಿತು ಕಟ್ಟುನಿಟ್ಟಿನ ಮೇಲ್ವಿಚಾರಣೆ ಮಾಡಲು ಹಾಗೂ ಜವಾಬ್ದಾರಿ ಕಾರ್ಯನಿರ್ವಹಣೆಯನ್ನು ಖಾತ್ರಿ ಪಡಿಸಿಕೊಳ್ಳಲು ಸೂಚಿಸಲಾಗಿದೆ. |
| ಉ) | ಅಂಗನವಾಡಿ ಕೇಂದ್ರಗಳಲ್ಲಿ ಶುದ್ಧ ಕುಡಿಯುವ ನೀರು, ಶೌಚಾಲಯ ಮತ್ತು ಮೂಲಸೌಲಭ್ಯಗಳ ಕೊರತೆ ಬಗ್ಗೆ ಬಂದಿರುವ ದೂರಿನ ಹಿನ್ನಲೆಯಲ್ಲಿ ಈ ಸೌಲಭ್ಯಗಳನ್ನು ಒದಗಿಸಲು ಅಥವಾ ಸುಧಾರಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳುತ್ತಿದೆ? | ಅಂಗನವಾಡಿ ಕೇಂದ್ರಗಳಲ್ಲಿ ಶುದ್ಧ ಕುಡಿಯುವ ನೀರು, ಶೌಚಾಲಯ ಮತ್ತು ಮೂಲ ಸೌಲಭ್ಯಗಳ ಕೊರತೆ ಬಗ್ಗೆ ಈವರೆವಿಗೂ ಯಾವುದೇ ದೂರು ಸ್ವೀಕೃತಗೊಂಡಿರುವುದಿಲ್ಲ.<br><br>ಪ್ರತೀ ವರ್ಷ ಅಂಗನವಾಡಿ ಕಟ್ಟಡಗಳ ನಿರ್ವಹಣೆ ಯೋಜನೆ (ರಾಜ್ಯ ವಲಯ) ಮತ್ತು ಅಂಗನವಾಡಿ ಕಟ್ಟಡ ದುರಸ್ಥಿ ಯೋಜನೆ (ಲಿಂಕ್ ಡಾಕ್ಯೂಮೆಂಟ್) ರಡಿ ಅನುದಾನವನ್ನು ಜಿಲ್ಲೆಗಳಿಗೆ ಒದಗಿಸಲಾಗುತ್ತಿದ್ದು, ಸದರಿ ಅನುದಾನದಲ್ಲಿ ಅಂಗನವಾಡಿ ಕಟ್ಟಡಗಳಲ್ಲಿ ಶೌಚಾಲಯ ನಿರ್ಮಾಣ, ನೀರಿನ ವ್ಯವಸ್ಥೆ, ಇತರೆ ಮೂಲಭೂತ ಸೌಲಭ್ಯಗಳು ಒದಗಿಸಲು ಹಾಗೂ ಇನ್ನಿತರೆ ದುರಸ್ಥಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ. |

**ಸಂಖ್ಯೆ: ಮಮಇ 46 ಐಸಿಡಿ 2026**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು

| ಅನುಬಂಧ -1 | | | | |
|---|---|---|---|---|
| (0 to 6 Years) Stunting (Height -for - age) (DECEMBER 2025) | | | | |
| **Sl . No.** | **District** | **Total Active Children Registered in the AWC for the Month** | **Total Active Children measured (Height & Weight) for the Month** | **Severely stunted (N)** |
| 1 | Belagavi | 338241 | 338021 | 50522 |
| 2 | Vijayapura | 191319 | 189518 | 46434 |
| 3 | Kalaburagi | 192534 | 190835 | 43919 |
| 4 | Raichur | 157264 | 156357 | 36836 |
| 5 | Koppal | 123553 | 123362 | 28070 |
| 6 | Yadgir | 110462 | 109427 | 27066 |
| 7 | Bidar | 111987 | 111040 | 23793 |
| 8 | Bagalkot | 129739 | 128999 | 21102 |
| 9 | Bellary | 99604 | 98743 | 20907 |
| 10 | Bengaluru Urban | 181918 | 181748 | 19978 |
| 11 | Tumakuru | 127355 | 127132 | 19743 |
| 12 | Vijayanagara | 101284 | 100366 | 19657 |
| 13 | Dharwad | 102757 | 102345 | 13487 |
| 14 | Chitradurga | 109673 | 109493 | 11762 |
| 15 | Haveri | 107141 | 106979 | 11203 |
| 16 | Shivamogga | 83783 | 83698 | 8748 |
| 17 | Davanagere | 100809 | 100707 | 8304 |
| 18 | Gadag | 73789 | 73570 | 7688 |
| 19 | Bangalore Rural | 46894 | 46798 | 7476 |
| 20 | Chamarajanagar | 38624 | 38578 | 7291 |
| 21 | Mysuru | 113164 | 112888 | 6451 |
| 22 | Kolar | 79761 | 79336 | 5862 |
| 23 | Uttara Kannada | 72779 | 72697 | 5337 |
| 24 | Mandya | 64856 | 64753 | 5262 |
| 25 | Chikballapur | 59340 | 59172 | 5259 |
| 26 | Udupi | 42333 | 42248 | 4304 |
| 27 | Kodagu | 20768 | 20742 | 3448 |
| 28 | Dakshina Kannada | 96923 | 96635 | 3248 |
| 29 | Hassan | 62699 | 62683 | 3173 |
| 30 | Ramanagara | 42620 | 42582 | 2264 |
| 31 | Chikkamagaluru | 45671 | 45660 | 1337 |
| | **Total** | **3229644** | **3217112** | **479931** |

## ಅನುಬಂಧ-2

## ಮಕ್ಕಳ ಅಪೌಷ್ಠಿಕತೆ ನಿವಾರಣೆಗೆ ಸರ್ಕಾರದ ವತಿಯಿಂದ ಕೈಗೊಂಡ ಕ್ರಮಗಳು :

**1. ಪೂರಕ ಪೌಷ್ಠಿಕ ಆಹಾರ:**

(ಎ) **ಮಕ್ಕಳಿಗೆ ಪೂರಕ ಪೌಷ್ಠಿಕ ಆಹಾರ:** ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾದ 6 ತಿಂಗಳಿಂದ 6 ವರ್ಷದ ಮಕ್ಕಳಿಗೆ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ 300 ದಿನಗಳ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ.

- ಎಲ್ಲಾ ಮಕ್ಕಳಿಗೆ ಅಂಗನವಾಡಿ ಕೇಂದ್ರದಲ್ಲಿ ಪ್ರತಿದಿನ ರೂ.**8.00** ಮೌಲ್ಯದ **ಪೂರಕ ಪೌಷ್ಠಿಕ ಆಹಾರ**ವನ್ನು ನೀಡಲಾಗುತ್ತಿದೆ.
- **ತೀವ್ರ ಅಪೌಷ್ಠಿಕ** ಮಕ್ಕಳಿಗೆ ಪ್ರತಿ ದಿನ ರೂ.12.00 ಮೌಲ್ಯದ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ.
- ಅಂಗನವಾಡಿಗೆ ಹಾಜರಾಗುವ **3 ವರ್ಷದಿಂದ 6** ವರ್ಷದ ಎಲ್ಲಾ ಮಕ್ಕಳಿಗೆ ವಾರದಲ್ಲಿ **2 ದಿನ ಮೊಟ್ಟೆಯನ್ನು** ನೀಡಲಾಗುತ್ತಿದೆ.
- ರಾಜ್ಯ ಸರ್ಕಾರದ ಕ್ಷೀರಭಾಗ್ಯ ಯೋಜನೆಯಡಿ **6** ತಿಂಗಳಿಂದ 6 ವರ್ಷದ ಎಲ್ಲಾ ಅಂಗನವಾಡಿ ಮಕ್ಕಳಿಗೆ ವಾರದಲ್ಲಿ 5 ದಿನ 150 ಮಿ.ಲಿ ಹಾಲನ್ನು (15ಗ್ರಾಂ ಕೆನೆಭರಿತ ಹಾಲಿನಪುಡಿ, 5 ಗ್ರಾಂ ಸಕ್ಕರೆ) ನೀಡಲಾಗುತ್ತಿದೆ.
- 6 ತಿಂಗಳಿಂದ 3 ವರ್ಷದ ತೀವ್ರ / ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ ಹಾಗೂ 3 ದಿನ 20 ಗ್ರಾಂ. ಹಾಲಿನ ಪುಡಿಯನ್ನು ಮನೆಗೆ ವಿತರಿಸಲಾಗುತ್ತಿದೆ.
- 3 ವರ್ಷದಿಂದ 6 ವರ್ಷದ ತೀವ್ರ / ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 5 ದಿನ ಮೊಟ್ಟೆ ಹಾಗೂ 3 ದಿನ 20 ಗ್ರಾಂ. ಹಾಲಿನ ಪುಡಿಯನ್ನು ಮನೆಗೆ ವಿತರಿಸಲಾಗುತ್ತಿದೆ.
- ತೀವ್ರ ಅಪೌಷ್ಠಿಕ ಮಕ್ಕಳಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪೌಷ್ಠಿಕ ಪುನರ್ವಸತಿ ಕೇಂದ್ರ (NRC) ಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.
- ಆರೋಗ್ಯ ಮತ್ತು ಪೌಷ್ಠಿಕ ಶಿಬಿರಗಳನ್ನು ಏರ್ಪಡಿಸಿ ಅಧಿಕ ಪೌಷ್ಠಿಕತೆಯುಳ್ಳ ಆಹಾರಗಳನ್ನು ತಯಾರಿಸುವ ಕುರಿತು ಮತ್ತು ಮಕ್ಕಳಿಗೆ ಪೌಷ್ಠಿಕತೆಯುಳ್ಳ ಆಹಾರವನ್ನು ನೀಡಲು ಅರಿವು ಕಾರ್ಯಕ್ರಮವನ್ನು ನಡೆಸಲಾಗುತ್ತಿದೆ ಹಾಗೂ ಪೋಷಣ್ ಮಾಸಾಚರಣೆ ಕಾರ್ಯಕ್ರಮದಲ್ಲಿಯೂ ಸಹ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ವಿಶೇಷ ಪೌಷ್ಠಿಕ ಶಿಬಿರಗಳನ್ನು ಆಯೋಜಿಸಲಾಗುತ್ತಿರುತ್ತದೆ.

**2. ಜುಚ್ಚುಮದ್ದು ಕಾರ್ಯಕ್ರಮ: /**

6 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಮತ್ತು ಗರ್ಭಿಣಿಯರಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ನಿಗದಿತ ಚುಚ್ಚುಮದ್ದನ್ನು ನೀಡಲಾಗುತ್ತಿದೆ.

**3. ಆರೋಗ್ಯ ತಪಾಸಣೆ:**

ಅಂಗನವಾಡಿ ಕೇಂದ್ರದಲ್ಲಿ ದಾಖಲಾಗಿರುವ ಎಲ್ಲಾ ಮಕ್ಕಳ ಆರೋಗ್ಯ ತಪಾಸಣೆಯನ್ನು ನಿಯಮಿತವಾಗಿ 3 ತಿಂಗಳಿಗೊಮ್ಮೆ (RBSK ಮತ್ತು ವೈದ್ಯಕೀಯ ಅಧಿಕಾರಿಗಳಿಂದ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ನಡೆಸಲಾಗುತ್ತಿದೆ.

**4.ಮಾಹಿತಿ ಸೇವೆ:**

ಅಂಗನವಾಡಿ ಕೇಂದ್ರಗಳಿಗೆ ವೈದ್ಯಾಧಿಕಾರಿಗಳು ಭೇಟಿ ನೀಡಿ ಮಕ್ಕಳ ಆರೋಗ್ಯ ತಪಾಸಣೆ ಮಾಡಿದಾಗ ಹೆಚ್ಚಿನ ತಪಾಸಣೆಗೆ ಅಥವಾ ಚಿಕಿತ್ಸೆಗೆ ತಾಲ್ಲೂಕು ಆರೋಗ್ಯ ಕೇಂದ್ರ / ಜಿಲ್ಲಾ

ಆರೋಗ್ಯ ಕೇಂದ್ರಕ್ಕೆ / ಪೌಷ್ಠಿಕ ಪುನರ್ವಸತಿ ಕೇಂದ್ರಗಳಿಗೆ ಕಳುಹಿಸಲು ಸೂಚಿಸುತ್ತಾರೆ. ವೈದ್ಯರು ಸೂಚಿಸಿದಂತೆ ಅಂಗನವಾಡಿ ಕಾರ್ಯಕರ್ತೆಯರು ಹೆಚ್ಚಿನ ಚಿಕಿತ್ಸೆ, ತಪಾಸಣೆಗೆ ಮಕ್ಕಳನ್ನು ಕಳುಹಿಸಿಕೊಡುತ್ತಾರೆ.

**5. ಚಿಗುರು ಕಾರ್ಯಕ್ರಮ** : ಇದಲ್ಲದೆ, ಅಪೌಷ್ಠಿಕತೆಯನ್ನು ನಿವಾರಿಸಲು ಸಮುದಾಯ ಆಧಾರಿತ ತೀವ್ರ ಅಪೌಷ್ಠಿಕ ಮಕ್ಕಳ ನಿರ್ವಹಣೆ (C-MAM) ಕಾರ್ಯಕ್ರಮ "ಚಿಗುರು" ಎಂಬ ವಿನೂತನ ಯೋಜನೆಯನ್ನು ಪ್ರಸ್ತುತ ಬಳ್ಳಾರಿ, ಬೀದರ, ಕಲಬುರಗಿ, ಯಾದಗಿರಿ, ಬೆಳಗಾವಿ, ರಾಯಚೂರು, ಚಿತ್ರದುರ್ಗ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗಿದೆ. ಸದರಿ ಯೋಜನೆಯು ಆರಂಭಿಕ ಹಂತಗಳಲ್ಲಿ ತೀವ್ರ ಅಪೌಷ್ಠಿಕತೆಯನ್ನು ಗುರುತಿಸಿ, ವೈದ್ಯಕೀಯ ಸಮಸ್ಯೆಗಳಿಲ್ಲದ ತೀವ್ರ ಮತ್ತು ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವೈದ್ಯಕೀಯ ಪೋಷಕಾಂಶಗಳು ಹಾಗೂ ಹೆಚ್ಚು ಪೋಷಕಾಂಶಯುಕ್ತ ಪೌಷ್ಠಿಕ ಆಹಾರವನ್ನು ನೀಡುವುದರೊಂದಿಗೆ, ಮಕ್ಕಳ ಪೋಷಣೆಯು ತಾಯಿಯ ಜವಾಬ್ದಾರಿ ಮಾತ್ರವಲ್ಲದೇ ಇಡೀ ಕುಟುಂಬದ ಜವಾಬ್ದಾರಿ ಎಂಬ ಪರಿಕಲ್ಪನೆಯಡಿ ರೂಪಿಸಲಾಗಿರುತ್ತದೆ.